ಡಾ. ಮನಮೋಹನ್ ಸಿಂಗ್
ಬೆಂಗಳೂರು ನಗರ ವಿಶ್ವವಿದ್ಯಾಲಯ

Dr. Manmohan Singh
Bengaluru City University

ಜ್ಞಾನಜ್ಯೋತಿ - ಸೆಂಟ್ರಲ್ ಕಾಲೇಜು ಕ್ಯಾಂಪಸ್, ಡಾ|| ಅಂಬೇಡ್ಕರ್ ವೀಧಿ, ಬೆಂಗಳೂರು- 560001
Ph.No.080-22961016/22131385 E-Mail ID: registrar@bcu.ac.in

**ಸಂಖ್ಯೆ:** ಡಾ.ಮಸಿಬೆಂನವಿ/ಶೈಕ್ಷಣಿಕ/2026-27 1022 **ದಿನಾಂಕ:** 18.06.2026

## ಸುತ್ತೋಲೆ

**ವಿಷಯ:** ವಿದ್ಯಾರ್ಥಿಗಳ ಹಾಜರಾತಿ ಕೊರತೆಯ ಹೆಸರಿನಲ್ಲಿ ಯಾವುದೇ ರೀತಿಯ ಶುಲ್ಕ (Attendance Shortage Fee) ವಸೂಲಿ ಮಾಡದಿರುವ ಕುರಿತು.

**ಉಲ್ಲೇಖ:**
1. ವಿ.ವಿ. ಅಧಿಸೂಚನೆ ಸಂಖ್ಯೆ:BCU/Syn/NEP/Regulations/373/2022-23 ದಿನಾಂಕ:22.04.2022
2. ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ:18.06.2026

****

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ ಕೆಲವು ಸಂಯೋಜಿತ ಕಾಲೇಜುಗಳಲ್ಲಿ ವಿದ್ಯಾರ್ಥಿಗಳಿಂದ ಹಾಜರಾತಿ ಕೊರತೆಯ (Attendance Shortage) ಹೆಸರಿನಲ್ಲಿ ಶುಲ್ಕವನ್ನು ವಸೂಲಿ ಮಾಡುತ್ತಿರುವ ಬಗ್ಗೆ ವಿಶ್ವವಿದ್ಯಾಲಯಕ್ಕೆ ದೂರುಗಳು ಸ್ವೀಕೃತವಾಗಿದ್ದು, ಇದನ್ನು ಗಂಭೀರವಾಗಿ ಪರಿಗಣಿಸಲಾಗಿದೆ.

ಈ ಕುರಿತು ಎಲ್ಲಾ ಸಂಯೋಜಿತ ಕಾಲೇಜುಗಳ ಪ್ರಾಂಶುಪಾಲರು/ಆಡಳಿತ ಮಂಡಳಿಯವರಿಗೆ ಸೂಚಿಸುವುದೇನೆಂದರೆ ವಿಶ್ವವಿದ್ಯಾಲಯವು ಹಾಜರಾತಿ ಕೊರತೆಯ ಹೆಸರಿನಲ್ಲಿ ಯಾವುದೇ ರೀತಿಯ ಶುಲ್ಕವನ್ನು ವಸೂಲಿ ಮಾಡಲು ಅನುಮತಿ ಅಥವಾ ಆದೇಶವನ್ನು ನೀಡಿರುವುದಿಲ್ಲ.

ವಿಶ್ವವಿದ್ಯಾಲಯದ ನಿಯಮಾವಳಿಗಳ ಪ್ರಕಾರ, ವಿದ್ಯಾರ್ಥಿಯು ಪ್ರತಿ ಸೆಮಿಸ್ಟರ್‌ನಲ್ಲಿ ಕಡ್ಡಾಯವಾಗಿ ಕನಿಷ್ಠ ಶೇ.75ರಷ್ಟು ಹಾಜರಾತಿಯನ್ನು ಹೊಂದಿರಬೇಕು. ನಿಗದಿತ ಹಾಜರಾತಿಯನ್ನು ಹೊಂದಿರದ ವಿದ್ಯಾರ್ಥಿಗಳನ್ನು ವಿಶ್ವವಿದ್ಯಾಲಯದ ನಿಯಮಾನುಸಾರ ಪರೀಕ್ಷೆಗೆ ಹಾಜರಾಗಲು ಅನುಮತಿಸಬಾರದು. ಹಾಜರಾತಿ ಕೊರತೆಯನ್ನು ಸರಿದೂಗಿಸುವ ಉದ್ದೇಶದಿಂದ ಯಾವುದೇ ವಿಧದ ದಂಡ, ಶುಲ್ಕ ಅಥವಾ ವಿಶೇಷ ಶುಲ್ಕವನ್ನು ವಿಧಿಸುವುದು ವಿಶ್ವವಿದ್ಯಾಲಯದ ನಿಯಮಗಳ ವಿರುದ್ಧವಾಗಿದ್ದು, ಮಹಾವಿದ್ಯಾಲಯಗಳ ವಿರುದ್ಧ ಶಿಸ್ತು ಕ್ರಮ ಜರುಗಿಸಲು ಅವಕಾಶ ಇರುತ್ತದೆ.

ಆದ್ದರಿಂದ, ಯಾವುದೇ ಸಂಯೋಜಿತ ಕಾಲೇಜುಗಳು, ಹಾಜರಾತಿ ಕೊರತೆಯ ಹೆಸರಿನಲ್ಲಿ ವಿದ್ಯಾರ್ಥಿಗಳಿಂದ ಪ್ರತ್ಯಕ್ಷವಾಗಿ ಅಥವಾ ಪರೋಕ್ಷವಾಗಿ ಯಾವುದೇ ರೀತಿಯ ಶುಲ್ಕವನ್ನು ವಸೂಲು ಮಾಡುವುದನ್ನು ಕಟ್ಟುನಿಟ್ಟಾಗಿ ನಿರ್ಬಂಧಿಸಲಾಗಿದೆ.

ಮು.ತಿ.ನೋ

ಈ ಸೂಚನೆಯನ್ನು ಉಲ್ಲಂಘಿಸಿ ಶುಲ್ಕ ವಸೂಲಿ ಮಾಡಿರುವುದು ಅಥವಾ ಮುಂದುವರೆಸಿರುವುದು ಕಂಡುಬಂದಲ್ಲಿ, ಸಂಬಂಧಿತ ಕಾಲೇಜಿನ ವಿರುದ್ಧ ವಿಶ್ವವಿದ್ಯಾಲಯದ ನಿಯಮಾವಳಿಗಳ ಅನ್ವಯ ಸೂಕ್ತ ಶಿಸ್ತು ಕ್ರಮ ಹಾಗೂ ದಂಡ ವಿಧಿಸುವ ಕ್ರಮ ಕೈಗೊಳ್ಳಲಾಗುವುದು. ಅಗತ್ಯವಿದ್ದಲ್ಲಿ, ಕಾಲೇಜಿನ ಸಂಯೋಜನೆಯನ್ನು ರದ್ದುಗೊಳಿಸುವ ಕ್ರಮವನ್ನೂ ಪರಿಗಣಿಸಲಾಗುವುದು ಎಂದು ಈ ಮೂಲಕ ತಿಳಿಸಲಾಗಿದೆ.

ಈ ಸುತ್ತೋಲೆಯಲ್ಲಿರುವ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಎಲ್ಲಾ ಸಂಯೋಜಿತ/ಸ್ವಾಯತ್ತ ಕಾಲೇಜುಗಳಿಗೆ ತಿಳಿಸಲಾಗಿದೆ.

ಕುಲಸಚಿವರು

ಕುಲಸಚಿವರು (ಆ)
ಡಾ. ಮನಮೋಹನ್ ಸಿಂಗ್
ಬೆಂಗಳೂರು ... ವಿಶ್ವವಿದ್ಯಾಲಯ
ಬೆಂಗಳೂರು - 560 001

ಪ್ರತಿಗಳು:

1. ಕುಲಪತಿಗಳ ಆಪ್ತ ಕಾರ್ಯಾಲಯ/ಕುಲಸಚಿವರು(ಮೌ)/ವಿತ್ತಾಧಿಕಾರಿಗಳು ಡಾ. ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾನಿಲಯ, ಬೆಂಗಳೂರು.
2. ಕಛೇರಿ ಪ್ರತಿ.